ಚುಟುಕು ಸುದ್ದಿ

ದಾಂಧಲೆ ಪ್ರಕರಣ ಆರೋಪಿಗಳಿಗೆ ಜಾಮೀನು

ಮಂಗಳೂರು: ನಗರದ ಯುನಿಸೆಕ್ಸ್ ಸೆಲೂನ್, ಮಸಾಜ್ ಪಾರ್ಲರ್‌ನಲ್ಲಿ ನಡೆದ ದಾಂಧಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಮಸೇನೆಯ ಸ್ಥಾಪಕ ಅಧ್ಯಕ್ಷ ಪ್ರಸಾದ್ ಅತ್ತಾವರ ಸಹಿತ 11 ಆರೋಪಿಗಳಿಗೆ ಮಂಗಳೂರಿನ 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಷರತ್ತು ಬದ್ಧ ಜಾಮೀನು ನೀಡಿದೆ.

ಈ ಪ್ರಕರಣದಲ್ಲಿ 14 ಮಂದಿಯನ್ನು ಪೊಲೀಸರು ಬಂಧಿಸಿದ್ದು, ಆ ಪೈಕಿ ಮೂವರು ಜಾಮೀನಿಗೆ ಅರ್ಜಿ ಸಲ್ಲಿಸಿರಲಿಲ್ಲ. ಅರ್ಜಿ ಸಲ್ಲಿಸಿದ 11 ಮಂದಿಗೆ ನ್ಯಾಯಾಧೀಶರು ಷರತ್ತುಬದ್ಧ ಜಾಮೀನು ನೀಡಿದ್ದಾರೆ.

ಜ.23ರಂದು ನಗರದ ಬಿಜೈನಲ್ಲಿರುವ ಕಲರ್ಸ್ಸ್ ಯುನಿಸೆಕ್ಸ್ ಸೆಲೂನ್ಗೆ ನುಗ್ಗಿ ಆರೋಪಿಗಳು ದಾಂಧಲೆ ನಡೆಸಿದ್ದರು. ಬಳಿಕ ಆ ದೃಶ್ಯವನ್ನು ಸಾಮಾಜಿಕ ಜಾಲತಾಣದಲ್ಲಿ ಹರಿಯಬಿಟ್ಟಿದ್ದರು. ತಕ್ಷಣ ಎಚ್ಚೆತ್ತುಕೊಂಡ ಬರ್ಕೆ ಪೊಲೀಸರು ಪ್ರಸಾದ್ ಅತ್ತಾವರ ಸಹಿತ 14 ಮಂದಿಯನ್ನು ಬಂಧಿಸಿದ್ದರು. ಆರೋಪಿಗಳಿಗೆ ಮಂಗಳೂರಿನ 6ನೆ ಜೆಎಂಎಫ್ಸಿ ನ್ಯಾಯಾಲಯ ಫೆ.7ರವರೆಗೆ ನ್ಯಾಯಾಂಗ ಬಂಧನ ವಿಧಿಸಿತ್ತು.

ಪ್ರಾಮಾಣಿಕತೆಗೆ ಪ್ರಶಂಸೆ

ಮಂಗಳೂರು: ಲಾಲ್‌ಬಾಗ್ ಮಂಗಳೂರು ಮಹಾನಗರ ಪಾಲಿಕೆ ಬಳಿ ಯಾವುದೇ ದಾಖಲೆ ಇಲ್ಲದೆ ತನಗೆ ಸಿಕ್ಕಿದ 1.5 ಲಕ್ಷ ಮೊತ್ತದ ಹಣದ ಚೀಲವನ್ನು ತನ್ನದೇ ಆದ ಖಾಸಗಿ ತನಿಖೆ ನಡೆಸಿ ಮಂಗಳೂರು ಸಿವಿಕ್ ಗ್ರೂಪಿನ ಸ್ಥಾಪಕ ಸಂಚಾಲಕ ನೈಜಿಲ್ ಅಲ್ಬಕರ್ಕ್‌ರವರು ಬರ್ಕೆ ಪೊಲೀಸರ ಮುಖಾಂತರ ವಾರಿಸುದಾರರಿಗೆ ಒಪ್ಪಿಸಿದರು. ನೈಜಿಲ್ ಅಲ್ಬಕರ್ಕ್ ಅವರ ಪ್ರಾಮಾಣಿಕತೆಗೆ ಪ್ರಶಂಸೆ ವ್ಯಕ್ತವಾಗಿದೆ.

ಕೃಷಿ ವಿಜ್ಞಾನಿಗಳ ಸಭೆ

ಮಂಗಳೂರು: ಮೊದಲ ರೀತಿಯ ಉಪಕ್ರಮದಲ್ಲಿ ನೆಮಟೋಡ್‌ಗಳ ಬೆಳೆಯುತ್ತಿರುವ ಬೆದರಿಕೆಯನ್ನು ಪರಿಹರಿಸಲು ದೇಶಾದ್ಯಂತದ 100ಕ್ಕೂ ಹೆಚ್ಚು ಕೃಷಿ ವಿಜ್ಞಾನಿಗಳು ಸಭೆ ನಡೆಸಿದರು.

ಇದು ಬೆಳೆ ನಷ್ಟಕ್ಕೆ ಪ್ರಮುಖ ಕಾರಣವಾಗಿದೆ, ಇದರ ಪರಿಣಾಮವಾಗಿ ವಾರ್ಷಿಕವಾಗಿ 25,000 ಕೋಟಿ ರೂ. ಗೋವಾದಲ್ಲಿ ಸಿಂಜೆಂಟಾ ಇಂಡಿಯಾ ಆಯೋಜಿಸಿದ ವಿಚಾರ ಸಂಕಿರಣದಲ್ಲಿ, ಮಣ್ಣಿನ ಆರೋಗ್ಯವನ್ನು ಕಾಪಾಡಲು, ಬೆಳೆ ಉತ್ಪಾದಕತೆಯನ್ನು ಉಳಿಸಿಕೊಳ್ಳಲು ಮತ್ತು ರಾಸಾಯನಿಕ ಮಧ್ಯಸ್ಥಿಕೆಗಳನ್ನು ಕಡಿಮೆ ಮಾಡಲು ಪರಿಣಾಮಕಾರಿ ನೆಮಟೋಡ್ ನಿರ್ವಹಣೆಯ ತುರ್ತು ಅಗತ್ಯವನ್ನು ತಜ್ಞರು ತಿಳಿಸಿದರು.

ಎಂಡಿ ಸುಶೀಲ್ ಕುಮಾರ್, ಆರ್ ಮತ್ತು ಡಿ ಮುಖ್ಯಸ್ಥ ವಿನೋದ್ ಶಿವರೇನ್ ಇದ್ದರು.

'ನೃತ್ಯ ಸಂಭ್ರಮ–2025'

ಮಂಗಳೂರು: ನಗರದ ಕೊಡಿಯಾಲಬೈಲಿನ ಸವಿಜೀವನಂ ನೃತ್ಯಕಲಾಕ್ಷೇತ್ರದ ಶಿಷ್ಯರಿಂದಭರತನಾಟ್ಯ ಪ್ರದರ್ಶನ 'ನೃತ್ಯ ಸಂಭ್ರಮ–2025' ಸೈಂಟ್ ಅಲೋಶಿಯಸ್ ಕಾಲೇಜಿನ ಎಲ್‌ಸಿಆರ್‌ಐ ಆಡಿಟೋರಿಯಂನಲ್ಲಿ ಫೆ.9ರಂದು ಸಂಜೆ 5 ಗಂಟೆಗೆ ನಡೆಯಲಿದೆ.

ನೃತ್ಯಗುರು ಉಳ್ಳಾಲ ಮೋಹನ್ ಕುಮಾರ್ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಮಂಗಳೂರಿನ ನಾದನೃತ್ಯ ಸ್ಕೂಲ್ ಆಫ್ ಡಾನ್ಸ್ ಆ್ಯಂಡ್ ಕಲ್ಚರಲ್ ಟ್ರಸ್ಟ್‌ನ ನಿರ್ದೇಶಕ ಡಾ.ಭ್ರಮರಿ ಶಿವಪ್ರಕಾಶ್ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ ಎಂದು ಸವಿಜೀವನಂ ನೃತ್ಯ ಕಲಾ ಕ್ಷೇತ್ರ ಟ್ರಸ್ಟ್‌ನ ನಿರ್ದೇಶಕಿ, ನೃತ್ಯ ಶಿಕ್ಷಕಿ ಸವಿತಾ ಜೀವನ್ ಗುರುವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಹಾಡುಗಾರಿಕೆಯಲ್ಲಿ ರೋಹಿತ್ ಭಟ್ ಯು., ನಟುವಾಂಗದಲ್ಲಿ ಸವಿತಾ ಜೀವನ್, ಮೃದಂಗದಲ್ಲಿ ವಿನಯ್ ನಾಗರಾಜನ್, ಕೊಳಲಿನಲ್ಲಿ ರಾಕೇಶ್ ದತ್ ಸಹಕರಿಸಲಿದ್ದಾರೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಕಾರದೊಂದಿಗೆ ಈ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದರು. ಸವಿಜೀವನಂ ನೃತ್ಯ ಕಲಾಕ್ಷೇತ್ರದ ಜೀವನ್ ಕುಮಾರ್ ಮಂಜೇಶ್ವರ್, ಬಾಲಕೃಷ್ಣ, ಜಯಲಕ್ಷ್ಮಿ ಬಾಲಕೃಷ್ಣ, ಪ್ರಜ್ಞಾ ಕೆ, ಅಕ್ಷತಾ ಕಾಮತ್ ಇದ್ದರು.

ಬಸ್‌ನಲ್ಲಿ ಕಳವು: ಬಂಧನ

ಕಾಸರಗೋಡು: ಬಸ್‌ನಲ್ಲಿ ಪ್ರಯಾಣಿಕರ ಹಣ ಹಾಗೂ ಮೊಬೈಲ್ ಫೋನ್ ಕಳವುಗೈದ ಆರೋಪದಲ್ಲಿ ಮೂವರು ಮಹಿಳೆಯರನ್ನು ಮಂಜೇಶ್ವರ ಠಾಣಾ ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಮಂಗಳವಾರ ಮಧ್ಯಾಹ್ನ ಕರ್ನಾಟಕ ಸಾರಿಗೆ ನಿಗಮದ ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ವೇಳೆ ಕುಂಜತ್ತೂರಿನ ತಾರಾಮಣಿ ಎಂಬವರ ಮೊಬೈಲ್ ಫೋನ್, ಎಂಟು ಸಾವಿರ ರೂ.ನಗದು ಒಳಗೊಂಡ ಬ್ಯಾಗನ್ನು ಕಳವಾಗಿತ್ತು. ಈ ಬಗ್ಗೆ ಮಂಜೇಶ್ವರ ಠಾಣಾ ಪೊಲೀಸರಿಗೆ ದೂರು ನೀಡಲಾಗಿತ್ತು. ಈ ಹಿನ್ನೆಲೆಯಲ್ಲಿ ವಿವಿಧ ಸ್ಥಳ ಗಳಲ್ಲಿನ ಸಿಸಿಟಿವಿ ಕ್ಯಾಮರಾಗಳನ್ನು ಕೇಂದ್ರೀಕರಿಸಿ ನಡೆಸಿದ ತನಿಖೆಯಂತೆ ಪೊಲೀಸರು ಶಂಕಿತ ಮೂವರು ಮಹಿಳೆಯರನ್ನು ವಶಕ್ಕೆ ಪಡೆದು ಹೆಚ್ಚಿನ ವಿಚಾರಣೆ ನಡೆಸುತ್ತಿದ್ದಾರೆ. ಪೊಲೀಸ್ ವಶದಲ್ಲಿರುವ ಮಹಿಳೆಯರು ತಮಿಳುನಾಡು ಮೂಲದವರೆಂದು ತಿಳಿದುಬಂದಿದೆ

ಶೈಲೇಶ್ ಆಚಾರ್ಯ ನಿಧನ

ಮಂಗಳೂರು: ಮುಡಿಪು ನಿವಾಸಿ ಶೈಲೇಶ್ ಆಚಾರ್ಯ (50) ಅಲ್ಪ ಕಾಲದ ಅಸೌಖ್ಯ ಫೆ.6ರಂದು ರಂದು ಮಂಜನಾಡಿಯ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ವೃತ್ತಿ ಯಲ್ಲಿ ಚಿನ್ನದ ಕೆಲಸ ಮಾಡುತ್ತಿದ್ದು, ಆಟೋ ರಿಕ್ಷಾವನ್ನು ನಡೆಸುತ್ತಿದ್ದರು. ತಾಯಿ, ಪತ್ನಿ, ಪುತ್ರಿ ಹಾಗೂ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ.

ಆಸ್ತಿ ಸಾಲ ಪಡೆದುಕೊಳ್ಳುವುದು ಮೊದಲಾದ ಪ್ರಕ್ರಿಯೆಗೆ ಸಮಸ್ಯೆ | ಉಡುಪಿಯಲ್ಲಿ 1 ಲಕ್ಷಕ್ಕೂ ಅಧಿಕ ಮೂಲ ಗೇಣಿದಾರರಿದ್ದಾರೆ

ಮೂಲ ಗೇಣಿದಾರರ ಸಮಸ್ಯೆ ಬಗೆಹರಿಸಲು ಆಗ್ರಹ

ಸಂ.ಕ.ಸಮಾಚಾರ, ಉಡುಪಿ

ಮೂಲ ಗೇಣಿ ಒಕ್ಕಲು ರಕ್ಷಣಾ ವೇದಿಕೆ ಮಂಗಳೂರು ಮತ್ತು ಉಡುಪಿ ಸಂಯುಕ್ತ ಆಶ್ರಯದಲ್ಲಿ ಉಡುಪಿ ಜಿಲ್ಲೆಯ 7 ತಾಲೂಕುಗಳಲ್ಲಿರುವ ಮೂಲ ಗೇಣಿದಾರರಿಗೆ ಸರಕಾರ ಮತ್ತು ನ್ಯಾಯಾಂಗ ಪ್ರಕ್ರಿಯೆಯಲ್ಲಿ ನಡೆದ ಬೆಳವಣಿಗೆ ಕುರಿತು ವಿಶೇಷ ಮಾಹಿತಿ ಹಾಗೂ ಸದಸ್ಯತ್ವ ಅಭಿಯಾನ ಫೆ.9ರಂದು ಉಡುಪಿ ಬಳಕೆದಾರರ ವೇದಿಕೆ ಸಭಾಂಗಣದಲ್ಲಿ ಬೆಳಗ್ಗೆ 10 ಗಂಟೆಗೆ ನಡೆಯಲಿದೆ ಎಂದು ಸಂಘಟನೆಯ ಜಿಲ್ಲಾ ಕಾರ್ಯಕರ್ತ ಕೊಕ್ಕರ್ಣೆ ಸುರೇಂದ್ರನಾಥ ಶೆಟ್ಟಿ ಗುರುವಾರ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಉಡುಪಿ ಜಿಲ್ಲೆಯಲ್ಲಿ ಸುಮಾರು 1 ಲಕ್ಷಕ್ಕೂ ಅಧಿಕ ಮೂಲ ಗೇಣಿದಾರರಿದ್ದಾರೆ. ರಾಜ್ಯದಲ್ಲಿ ಭೂಸುಧಾರಣೆ ಕಾಯ್ದೆ ಜಾರಿಯಾಗುವಾಗ ಮೂಲ ಗೇಣಿದಾರರ ಬಗ್ಗೆ ಯಾವುದೇ ನಿಶ್ಚಿತ ಬದಲಾವಣೆ ಮಾಡಲಾಗಿಲ್ಲ. ಮೂಲ ಗೇಣಿದಾರರು ಮೂಲಿದಾರರಿಗೆ ಸಂದಾಯಿಸಬೇಕಾದ ಗೇಣಿ ಅತೀ ಅಲ್ಪ (ಎಕರೆಗೆ 100ರೂ.) ವಾದ್ದರಿಂದ ಹೆಚ್ಚಿನ ಮೂಲಿದಾರರು ಅದನ್ನು ಪಡೆಯುತ್ತಿರಲಿಲ್ಲ. ಅಲ್ಲದೆ, ಹೆಚ್ಚಿನ ಮೂಲ ಗೇಣಿದಾರರಿಗೆ ತಮ್ಮ ಜಮೀನಿಗೆ ಸಂಬಂಧಪಟ್ಟ ಮೂಲಿದಾರರು ಯಾರೆಂದೇ ತಿಳಿದಿಲ್ಲ. ಆದರೆ, ಪಹಣಿಯಲ್ಲಿ ಅವರ ಹೆಸರು ಮೂಲ ಗೇಣಿದಾರರ ಜೊತೆಗೆ ಕಾಣಿಸಿಕೊಳ್ಳುತ್ತಿರುವುದರಿಂದ ಆಸ್ತಿ ಮಾರಾಟ, ಆಸ್ತಿ ಸಾಲ ಪಡೆದುಕೊಳ್ಳುವುದು ಮೊದಲಾದ ಪ್ರಕ್ರಿಯೆಗಳಿಗೆ ಸಮಸ್ಯೆಯಾಗುತ್ತಿದೆ ಎಂದವರು ತಿಳಿಸಿದರು.

ಹೈಕೋರ್ಟ್ ತೀರ್ಪು ಜಾರಿಗೊಳಿಸಿ:

ರಾಜ್ಯದ ಹಿಂದಿನ ಗೃಹ ಸಚಿವ ಡಾ.ವಿ.ಎಸ್. ಆಚಾರ್ಯ ಈ ಪದ್ಧತಿಯನ್ನು ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಹಿರಿಯ ಕಂದಾಯ ತಜ್ಞರು ಹಾಗೂ ತಹಶೀಲ್ದಾರರೊಂದಿಗೆ ಚರ್ಚಿಸಿ ಮೂಲಿದಾರರಿಗೆ 500 ವರ್ಷದ ಹಾಗೂ 1000 ವರ್ಷದ ಗೇಣಿಯನ್ನು ಪರಿಹಾರ ರೂಪದಲ್ಲಿ ನೀಡಲು ತೀರ್ಮಾನಿಸಿ ಒಂದು ವಿಧೇಯಕ ರಚಿಸಿ ಅದನ್ನು ವಿಧಾನಸಭೆ ಹಾಗೂ ವಿಧಾನ ಪರಿಷತ್ತಿನಲ್ಲಿ ಅಂಗೀಕರಿಸಿ, ರಾಷ್ಟ್ರಪತಿ ಅನುಮೋದನೆ ಪಡೆದು 2011ರಲ್ಲಿ ಕಾನೂನಾಗಿ ಪರಿವರ್ತಿಸಿ, 2012ರಲ್ಲೇ ಜಾರಿಗೆ ಬರುವಂತೆ

ಗಜೆಟ್ ನೋಟಿಫಿಕೇಶನ್ ಜಾರಿ ಮಾಡಿದ್ದರು.

ಆದರೆ, ಕೆಲವು ಮೂಲಿದಾರರು ತಮಗೆ ನೀಡಲಾಗುವ ಪರಿಹಾರದ ಮೊತ್ತ ಅತೀ ಕನಿಷ್ಟವೆಂದು ರಾಜ್ಯ ಹೈಕೋರ್ಟಿನಲ್ಲಿ ಕಾನೂನು ಜಾರಿಯಾಗದಂತೆ ತಡೆದರು. ಉಚ್ಚ ನ್ಯಾಯಾಲಯ ಮೂಲಿದಾರರು ಆಸ್ತಿಯ ಸಂಪೂರ್ಣ ಹಕ್ಕುದಾರರಲ್ಲ, ಅವರು ಸರಕಾರಕ್ಕೆ ಕೊಡಬೇಕಾದ ಕಂದಾಯವನ್ನು ಒಕ್ಕಲುಗಳಿಂದ ಪಡೆದು ಸರಕಾರದ ಖಜಾನೆಗೆ ಸಂದಾಯ ಮಾಡುವ ಜವಾಬ್ದಾರಿ ಹೊಂದಿರುವವರೆಂದು ಪರಿಗಣಿಸಿ ಒಕ್ಕಲುಗಳು ಹಾಗೂ ಸರಕಾರದ ಪರವಾಗಿ ತೀರ್ಪು ನೀಡಿದೆ.

ಮೂಲಿದಾರರು ಈ ತೀರ್ಪನ್ನು ಪ್ರಶ್ನಿಸಿ ಹೈಕೋರ್ಟಿನ ದ್ವಿಸದಸ್ಯ ಪೀಠದಲ್ಲಿ ಪುನಃ ದಾವೆ ಆಲಿಸುವಂತೆ ಮೇಲ್ಮನವಿ ಸಲ್ಲಿಸಿದ್ದರಿಂದ ಇದೀಗ ಪ್ರಕರಣ ಹೈಕೋರ್ಟಿನ ದ್ವಿಸದಸ್ಯ ಪೀಠದಲ್ಲಿ ವಿಚಾರಣಾ ಹಂತದಲ್ಲಿದೆ.

ಈ ಮಾಹಿತಿ ಜಿಲ್ಲೆಯ ಲಕ್ಷಾಂತರ ಮೂಲ ಗೇಣಿದಾರರಿಗೆ ತಿಳಿದಿಲ್ಲ. ಅಲ್ಲದೆ, ನ್ಯಾಯಾಲಯದಲ್ಲಿ ಹೋರಾಟ ನಡೆಸಬೇಕಾಗಿರುವುದರಿಂದ ವೇದಿಕೆಗೆ ಮೂಲ ಗೇಣಿದಾರರ ಬೆಂಬಲದ ಅಗತ್ಯವಿದೆ.

ಈ ನಿಟ್ಟಿನಲ್ಲಿ ಈ ಮಾಹಿತಿ ಹಾಗೂ ಸದಸ್ಯತ್ವ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದ ಅವರು, ಸರಕಾರ ಹೈಕೋರ್ಟ್ ಮೂಲ ಗೇಣಿದಾರರ ಪರವಾಗಿ ನೀಡಿರುವ ತೀರ್ಪಿನ ಜಾರಿಗೆ ಮುಂದಾಗಬೇಕು. ಅದಕ್ಕೆ ಬೇಕಾದ ಕಾನೂನು ಪ್ರಕ್ರಿಯೆ ನಡೆಸಬೇಕು ಎಂದು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ವೇದಿಕೆ ಅಧ್ಯಕ್ಷ ಎಂ.ಕೆ. ಯಶೋಧರ, ಕಾರ್ಯದರ್ಶಿ ಸಂದೇಶ ಪ್ರಭು, ಉಡುಪಿ ಜಿಲ್ಲಾ ಪ್ರತಿನಿಧಿ ಎಸ್.ಎಸ್. ಶೇಟ್, ಕಾರ್ಯಕಾರಿ ಸದಸ್ಯ ರೋನಾಲ್ಡ್ ಡಿ'ಸಿಲ್ವ ಹಾಗೂ ವಿಭಾಗ ಸಂಘಟನಾ ಪ್ರಮುಖ್ ಮೋಹನ್ ಕುಮಾರ್ ಕುಂಬ್ಳೇಕರ್ ಇದ್ದರು.

ಪ್ರಯಾಗ್ ರಾಜ್ ಕುಂಭ ಮೇಳದಲ್ಲಿ ಯಕ್ಷಧ್ರುವ ತಂಡ

ಸಂ.ಕ.ಸಮಾಚಾರ, ಮಂಗಳೂರು

ಮಹಾಕುಂಭ ಮೇಳದಲ್ಲಿ ಪ್ರಯಾಗ್ ರಾಜ್‌ನ ಪಲಿಮಾರು ಮಾಧ್ವ ಮಠದಲ್ಲಿ ಶ್ರೀ ವಿದ್ಯಾಧೀಶ ತೀರ್ಥ ಸ್ವಾಮೀಜಿಯವರ ಆಶೀರ್ವಾದ ಪಡೆದ ಯಕ್ಷಧ್ರುವ ಪಟ್ಲ ಫೌಂಡೇಶನ್‌ನ ಅಧ್ಯಕ್ಷ ಸತೀಶ್ ಶೆಟ್ಟಿ ಪಟ್ಲ ನೇತೃತ್ವದ ಕೇಂದ್ರೀಯ ಸಮಿತಿಯ ತಂಡವನ್ನು ಸ್ವಾಮೀಜಿಯವರ ಶಿಷ್ಯ ವೃಂದದವರು ಆತ್ಮೀಯವಾಗಿ ಸ್ವಾಗತಿಸುವುದರೊಂದಿಗೆ ಊಟ ಫಲಹಾರಗಳನ್ನು ನೀಡಿ ಸತ್ಕರಿಸಿದರು. ಹಾಗೂ ಬ್ರಾಹ್ಮೀ ಮುಹೂರ್ತದಲ್ಲಿ ತ್ರಿವೇಣಿ ಸಂಗಮದ ಪುಣ್ಯ ತೀರ್ಥ ಸ್ನಾನವು ಸ್ವಾಮೀಜಿಯವರ ನೇತೃತ್ವದಲ್ಲಿ ನೆರವೇರಿತು.

ಯಕ್ಷಧ್ರುವ ಪಟ್ಲ ಫೌಂಡೇಶನ್ ಟ್ರಸ್ಟ್‌ನ ಕೇಂದ್ರೀಯ ಸಮಿತಿಯ ಪ್ರಧಾನ ಕಾರ್ಯದರ್ಶಿ ಪುರುಷೋತ್ತಮ ಕೆ.ಭಂಡಾರಿ, ಕೋಶಾಧಿಕಾರಿ ಸಿ.ಎ.ಸುರೇಶ್ ಕುಮಾರ್ ರೈ, ಸಂಘಟನಾ ಕಾರ್ಯದರ್ಶಿ ಪ್ರದೀಪ್ ಆಳ್ವ ಕದ್ರಿ, ಜೊತೆ ಕಾರ್ಯದರ್ಶಿ ರವಿಚಂದ್ರ ಶೆಟ್ಟಿ ಅಶೋಕನಗರ ಮತ್ತು ಡಾ. ಪ್ರಖ್ಯಾತ್ ಶೆಟ್ಟಿ ಉಪಸ್ಥಿತರಿದ್ದರು.

ಶಿವಪಾಡಿ ವೈಭವ ಕಾರ್ಯಕ್ರಮದ ಆಮಂತ್ರಣ ಪತ್ರಿಕೆ ಬಿಡುಗಡೆ

ಸಂ.ಕ.ಸಮಾಚಾರ, ಉಡುಪಿ

ಫೆ.22ರಿಂದ 26ರ ನಡೆಯಲಿರುವ ಶಿವಪಾಡಿ ವೈಭವ ಕಾರ್ಯಕ್ರಮದ ಆಮಂತ್ರಣ ಪತ್ರಿಕೆಯನ್ನು ಮಣಿಪಾಲ ಶಿವಪಾಡಿ ಉಮಾಮಹೇಶ್ವರ ದೇವಸ್ಥಾನದಲ್ಲಿ ಅನಾವರಣಗೊಳಿಸಲಾಯಿತು.

ಶಿವಪಾಡಿ ವೈಭವ ಆಚರಣಾ ಸಮಿತಿ ಅಧ್ಯಕ್ಷ ಹಾಗೂ ಮಾಜಿ ಶಾಸಕ ಕೆ. ರಘುಪತಿ ಭಟ್ ಹಾಗೂ ಎಸ್‌ಕೆಡಿಆರ್‌ಪಿ ಟ್ರಸ್ಟ್ ಉಡುಪಿ ನಿರ್ದೇಶಕ ನಾಗರಾಜ ಜೆ. ಶೆಟ್ಟಿ ಸಂಯುಕ್ತವಾಗಿ ಬಿಡುಗಡೆಗೊಳಿಸಿದರು.

ಶಿವಪಾಡಿ ಶ್ರೀ ಉಮಾಮಹೇಶ್ವರ ದೇವಸ್ಥಾನದ ಆಡಳಿತ ಮೊಕ್ತೇಸರ ಮಹೇಶ್ ಠಾಕೂರ್, ದೇವಸ್ಥಾನ ಅಭಿವೃದ್ಧಿ ಟ್ರಸ್ಟ್ ಅಧ್ಯಕ್ಷ ದಿನೇಶ್ ಪ್ರಭು, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಒಕ್ಕೂಟದ ಕೇಂದ್ರೀಯ ಸಮಿತಿ ಜಿಲ್ಲಾಧ್ಯಕ್ಷ ಮತ್ತು ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಸುಂದರ ಜೆ. ಕಲ್ಮಾಡಿ, ಪರೀಕದ ಧರ್ಮಸ್ಥಳ ನ್ಯಾಚುರೋಪತಿ ಆಸ್ಪತ್ರೆ ಮುಖ್ಯ ವೈದ್ಯಾಧಿಕಾರಿ ಡಾ.ಗೋಪಾಲ ಪೂಜಾರಿ, ಉಡುಪಿ ಜಿಲ್ಲಾ ಭಜನಾ ಪರಿಷತ್ ಅಧ್ಯಕ್ಷ ವಿಜಯ ಕೊಂಡಾಡಿ, ಮಾಹೆ ಡೈರೆಕ್ಟರ್ ಆಫ್ ಸ್ಟೂಡೆಂಟ್ ಅಫೇರ್ಸ್‌ನ ಡಾ. ಗೀತಾ ಮೈಯ್ಯ, ದೇವಳದ ಶಾಶ್ವತ ಟ್ರಸ್ಟಿ ದಿನೇಶ್ ಸಾಮಂತ್, ಕಾರ್ಯದರ್ಶಿ ಗೋಪಾಲಕೃಷ್ಣ ಪ್ರಭು, ಕೆಕೆ ಡಿಜಿಬಿ ವಿದ್ಯಾಪ್ರಸಾರಕ ಮಂಡಲ ಅಧ್ಯಕ್ಷ ಸತೀಶ್ ಪಾಟೀಲ್, ಟ್ರಸ್ಟಿಗಳಾದ ಪುರುಷೋತ್ತಮ ಪ್ರಭು, ಅಶೋಕ್ ಸಾಮಂತ್, ಶ್ರೀಕಾಂತ್ ಪ್ರಭು, ಜಿ.ಕೃಷ್ಣರಾಯ ಪಾಟೀಲ್, ಪ್ರಕಾಶ್ ಪ್ರಭು, ಸಂಜಯ ಪ್ರಭು ಮೊದಲಾದವರಿದ್ದರು.

ಎಸ್‌ಕೆಡಿಆರ್‌ಪಿ ಉಡುಪಿ ತಾಲೂಕು ಯೋಜನಾಧಿಕಾರಿ ರಾಮ ಎಂ. ಸ್ವಾಗತಿಸಿ, ಮಣಿಪಾಲ ವಲಯ ಮೇಲ್ವಿಚಾರಕ ಬಾಲಚಂದ್ರ ಮತ್ತು ಕೃಷಿ ಮೇಲ್ವಿಚಾರಕ ಮಂಜುನಾಥ್ ನಿರ್ವಹಿಸಿದರು.

ಬಿಜೆಪಿ ಪ್ರತಿಭಟನೆಗೆ ಜನ ಸೇರಿಸಲು ಸುಳ್ಳು ಪ್ರಚಾರ

ಸಂ.ಕ.ಸಮಾಚಾರ, ಕಾರ್ಕಳ

ಜನಪರ ಆಡಳಿತವನ್ನು ನೀಡುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರದ ಜನಪ್ರಿಯತೆಯನ್ನು ಸಹಿಸಿಕೊಳ್ಳಲಾರದೆ ಸರ್ಕಾರದ ವಿರುದ್ಧ ಕಾರ್ಕಳ ಬಿಜೆಪಿ ಹಮ್ಮಿಕೊಂಡಿರುವ ಪ್ರತಿಭಟನೆಗೆ ಜನಸೇರಿಸಲು ಸುಳ್ಳು ಪ್ರಚಾರ ಮಾಡುತ್ತಿರುವುದನ್ನು ಕಾರ್ಕಳ ಬ್ಲಾಕ್ ಕಾಂಗ್ರೆಸ್ ತೀವ್ರವಾಗಿ ಖಂಡಿಸುತ್ತದೆ ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶುಭದರಾವ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾಂಗ್ರೆಸ್ ಖಂಡನೆ

ಗೃಹಲಕ್ಷ್ಮಿ,ಗೃಹಜ್ಯೋತಿ,ಅನ್ನಭಾಗ್ಯ, ಯುವನಿಧಿ, ಶಕ್ತಿ ಯೋಜನೆ,ಹೆಸರಿನ ಮಹತ್ವದ ಪಂಚಗ್ಯಾರಂಟಿ ಯೋಜನೆ ಜನರಿಗೆ ನೀಡಿ ಬಡವರ, ಜನ ಸಾಮಾನ್ಯರ ಶ್ರಮಿಸುತ್ತಿರುವ ಕಾಂಗ್ರೆಸ್ ಸರ್ಕಾರದ ವಿರುದ್ಧ ಇಲ್ಲ ಸಲ್ಲದ ವಿಚಾರಗಳನ್ನು ಮುಂದಿಟ್ಟುಕೊಂಡು ಕಾರ್ಕಳ ಬಿಜೆಪಿ ಪ್ರತಿಭಟನೆ ನಡೆಸುತ್ತಿರುವುದು ನಾಚಿಕೆಗೇಡಿನ ವಿಚಾರವಾಗಿದೆ ಎಂದರು.

ಕಾರ್ಕಳದಲ್ಲಿ ವ್ಯಾಪಕ ಜನವಿರೋಧ ವನ್ನು ಎದುರಿಸುತ್ತಿರುವ ಕಾರ್ಕಳ ಬಿಜೆಪಿ ಜನರಿಗೆ ಸುಳ್ಳು ಮಾಹಿತಿಯನ್ನುನೀಡಿ ಪ್ರತಿಭಟನೆಯ ಹೆಸರಿನಲ್ಲಿ ದಾರಿ ತಪ್ಪಿಸುವ ಯತ್ನ ನಡೆಸುತ್ತಿರುವುದು ಖಂಡನೀಯ ಎಂದರು.

ಅಸ್ತಿತ್ವವನ್ನು ಉಳಿಸಿಕೊಳ್ಳುವ ಪ್ರಯತ್ನದಲ್ಲಿರುವ ಬಿಜೆಪಿ ಜನರಿಗೆ ಅನಾವಶ್ಯಕವಾಗಿ ಭಯ ಹುಟ್ಟಿಸುತ್ತಿದೆ. ಧರ್ಮ ರಕ್ಷಣೆ, ಧರ್ಮಕ್ಕೆ ಅಪಾಯ ಎನ್ನುವ ಬಿಜೆಪಿಯ ಸಾಂಪ್ರದಾಯಿಕ ಸುಳ್ಳುಗಳನ್ನು ಜನರು ಈಗ ನಂಬುವ ಸ್ಥಿತಿಯಲ್ಲಿ ಇಲ್ಲ, ಇದರಿಂದ ಕಂಗೆಟ್ಟಿರುವ ಕಾರ್ಕಳ ಬಿಜೆಪಿ ಬೆಲೆ ಏರಿಕೆ, ಮುಂತಾದ ವಿಚಾರಗಳನ್ನು ಹೇಳಿ ಜನರಿಗೆ ಮಂಕು ಬೂದಿ ಎರಚುವ ಪ್ರಯತ್ನದಲ್ಲಿದೆ ಎಂದರು.

ಪ್ರತಿಭಟನೆಗೆ